ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಸರಣಿ ಬ್ಯಾರೇಜ್ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಾಚಾರ

ಶ್ರೀರಘುನಾಥ್‌ರಾವ್‌ಮಲ್ಕಾಪೂರೆ(ವಿಧಾನಸಭೆಯಿಂದಚುನಾಯಿತರಾದವರು):-

768 (901) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿ ಗೇಟ್ ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್

ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದರ ವಿವರ ನೀಡುವುದು ;

(ಆ) 04 ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣವೆಷ್ಟು ; ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ ;

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಉಂಟಾಗಲು ಕಾರಣವೇನು ; ಇದಕ್ಕೆ ಕಾರಣರಾದವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕೂಡಲೇ 4 ಬ್ಯಾರೇಜ್‌ಗಳ ಗೇಟುಗಳನ್ನು ಸರಿಪಡಿಸಿ ರೈತರಿಗೆ ನೀರು ಸರಬರಾಜು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)